ಕರ್ನಾಟಕ ಸರ್ಕಾರ

ನಿರ್ದೇಶಕರ ಕಛೇರಿ, ಪದವಿ ಪೂರ್ವ ಶಿಕ್ಷಣ ಇಲಾಖೆ, 18 ನೇ ಅಡ್ಡರಸ್ತೆ, ಮಲ್ಲೇಶ್ವರಂ, ಬೆಂಗಳೂರು –12
*E-mail: commissioner.pue.@gmail.com *Ph: No. 23361857, 23361858* Fax-23361852*

ಸಂಖ್ಯೆ: ಪಪೂಶಿ/ಆಆಶಾ/ಶಿಕ್ಷಣ ಸ್ಪಂದನ/2020–21 ದಿನಾಂಕ: 20–02–2021.

**–:ಸುತ್ತೋಲೆ:–**

ವಿಷಯ:– ಮಾನ್ಯ ಗೌರವಾನ್ವಿತ ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ಸಚಿವರ ಅಧ್ಯಕ್ಷತೆಯಲ್ಲಿ ವಿಭಾಗೀಯ ಮಟ್ಟದ ಪದವಿ ಪೂರ್ವ ಕಾಲೇಜುಗಳ ಪ್ರಾಂಶುಪಾಲರ ಉಪನ್ಯಾಸಕರ ಹಾಗೂ ಸಿಬ್ಬಂದಿಗಳ ಸೇವಾ ಸೌಲಭ್ಯಗಳನ್ನು "ಶಿಕ್ಷಣ ಸ್ಪಂದನ" ಮೂಲಕ ಆಲಿಸಿ ಇತ್ಯರ್ಥಪಡಿಸುವ ಕುರಿತು.

ಉಲ್ಲೇಖ:– ಮಾನ್ಯ ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ಹಾಗೂ ಸಕಾಲ ಸಚಿವರು ಇವರ ಟಿಪ್ಪಣಿ ಪತ್ರ ಸಂಖ್ಯೆ: ಪ್ರಾ.ಪ್ರೌ.ಸ.ಸ/1500/2019–20 ದಿನಾಂಕ 18–02–2021.

****

ಉಲ್ಲೇಖಿತ ಪತ್ರದಲ್ಲಿ ಮಾನ್ಯ ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ಹಾಗೂ ಸಕಾಲ ಸಚಿವರು ದಿನಾಂಕ 01 ಹಾಗೂ 02ನೇ ಮಾರ್ಚ್ 2021 ರಂದು ಧಾರವಾಡದ ಆಯುಕ್ತಾಲಯದಲ್ಲಿ ಬೆಳಗಾವಿ ವಿಭಾಗದ ವ್ಯಾಪ್ತಿಯಲ್ಲಿ ಬರುವ ಎಲ್ಲಾ ಜಿಲ್ಲೆಗಳಲ್ಲಿರುವ ಸರ್ಕಾರಿ, ಅನುದಾನಿತ ಹಾಗೂ ಅನುದಾನರಹಿತ ಪದವಿ ಪೂರ್ವ ಕಾಲೇಜುಗಳಲ್ಲಿನ ಉಪನ್ಯಾಸಕರ ಹಾಗೂ ಸಿಬ್ಬಂದಿಗಳ ಸೇವಾ ಸೌಲಭ್ಯಗಳನ್ನು "ಶಿಕ್ಷಣ ಸ್ಪಂದನ" ಮೂಲಕ ಆಲಿಸಿ ಇತ್ಯರ್ಥಪಡಿಸುವ ಕುರಿತು ಕಡತ ವಿಲೇವಾರಿ ಅದಾಲತ್ ಅನ್ನು ನಡೆಸಲಿದ್ದಾರೆ.

ಈ "ಶಿಕ್ಷಣ ಸ್ಪಂದನ" ಕಾರ್ಯಕ್ರಮಕ್ಕೆ ಸಂಬಂಧಿಸಿದಂತೆ ದಿನಾಂಕ 22–02–2021 ರಿಂದ 24–02–22021 ರವರೆಗೆ ಬೆಳಗಾವಿ ವಿಭಾಗದ ಧಾರವಾಡ, ಹಾವೇರಿ, ಬಾಗಲಕೋಟೆ, ಬೆಳಗಾವಿ, ಉತ್ತರ ಕನ್ನಡ, ವಿಜಯಪುರ, ಗದಗ, ಚಿಕ್ಕೋಡಿ (ಶೈಕ್ಷಣಿಕ ಜಿಲ್ಲೆ) ಜಿಲ್ಲೆಗಳ ವ್ಯಾಪ್ತಿಯಲ್ಲಿ ಬರುವ ಸರ್ಕಾರಿ, ಅನುದಾನಿತ ಹಾಗೂ ಅನುದಾನರಹಿತ ಪದವಿ ಪೂರ್ವ ಕಾಲೇಜುಗಳಲ್ಲಿನ ಉಪನ್ಯಾಸಕರ ಹಾಗೂ ಸಿಬ್ಬಂದಿಗಳ ಸೇವಾ ಸೌಲಭ್ಯಗಳಿಗೆ ಸಂಬಂಧಿಸಿದಂತೆ ಬಾಕಿ ಪ್ರಕರಣಗಳು ಹಾಗೂ ಹೊಸ ಪ್ರಕರಣಗಳಿಗೆ ಸಂಬಂಧಿಸಿದಂತೆ ಮನವಿಗಳನ್ನು ಸ್ವೀಕರಿಸುವುದು. ಆಯಾ ದಿನದಂದು ಸ್ವೀಕರಿಸಲ್ಪಟ್ಟಂತಹ ಅರ್ಜಿಗಳ ಮೇಲೆ ಸ್ವೀಕೃತಿ ಸಂಖ್ಯೆ ಹಾಗೂ ಮೊಬೈಲ್ ಸಂಖ್ಯೆಯನ್ನು ನಮೂದಿಸಿ ಅಜಿದಾರರಿಗೆ ಸ್ವೀಕೃತಿ ನೀಡುವುದು. ಕಾರ್ಯಕ್ರಮದ ದಿನದಂದು ಅರ್ಹ ಅರ್ಜಿಗಳಿಗೆ ಸಂಬಂಧಿಸಿದ ಸಿಬ್ಬಂದಿಗಳು ಶಿಕ್ಷಣ ಸ್ಪಂದನ ಕಾರ್ಯಕ್ರಮಕ್ಕೆ ಹಾಜರಿರುವಂತೆ ಆಯಾ ಜಿಲ್ಲೆಗಳ ಉಪ ನಿರ್ದೇಶಕರು ಸೂಚನೆ ನೀಡುವುದು.

ಜಿಲ್ಲಾ ಉಪ ನಿರ್ದೇಶಕರು ತಮ್ಮ ಜಿಲ್ಲಾ ವ್ಯಾಪ್ತಿಯ ಎಲ್ಲಾ ಕಾಲೇಜುಗಳಿಂದ ಸ್ವೀಕರಿಸಲ್ಪಟ್ಟ ಅರ್ಜಿಗಳ ಸೇವಾ ಸೌಲಭ್ಯಗಳಿಗೆ ಸಂಬಂಧಿಸಿದಂತೆ ಅರ್ಜಿಗಳನ್ನು ನಿಯಮಾನುಸಾರ ಪರಿಶೀಲಿಸಿ ಜಿಲ್ಲಾ ಹಂತ ನಿರ್ದೇಶಕರ ಹಂತ ಹಾಗೂ ಸರ್ಕಾರದ ಹಂತ ಎಂದು ವರ್ಗೀಕರಿಸಿ ದಿನಾಂಕ 26-02-2021ರ ಒಳಗೆ ಆಯಾ ಜಿಲ್ಲಾ ಉಪ ನಿರ್ದೇಶಕರು ಸಂಗ್ರಹಿಸಿಟ್ಟುಕೊಂಡು ಸಾರ್ವಜನಿಕ ಶಿಕ್ಷಣ ಇಲಾಖೆಯ ಆಯುಕ್ತಾಲಯ ಧಾರವಾಡ ಇವರಿಗೆ ಒಂದು ಪ್ರತಿ ಸಲ್ಲಿಸುವುದು. ಕಾರ್ಯಕ್ರಮ ನಡೆಯುವ ದಿನ ಸಂಬಂಧಿಸಿದ ಎಲ್ಲಾ ಜಿಲ್ಲೆಗಳ ಉಪ ನಿರ್ದೇಶಕರು ಖುದ್ದು ಹಾಜರಿದ್ದು ಕಾರ್ಯಕ್ರಮವನ್ನು ಯಶಸ್ವಿಗೊಳಿಸಲು ಸಂಪೂರ್ಣ ಸಹಕಾರ ನೀಡುವುದು.ಈ ಕಾರ್ಯಕ್ರಮಕ್ಕೆ ವ್ಯಾಪಕ ಪ್ರಚಾರ ಮಾಡುವುದು. ಅಂದರೆ ಆಕಾಶವಾಣಿ, ರೇಡಿಯೋ, ದೃಶ್ಯಮಾಧ್ಯಮದ ಮೂಲಕ ವ್ಯಾಪಕ ಪ್ರಚಾರ ಮಾಡಲು ಅಗತ್ಯ ಕ್ರಮಕೈಗೊಳ್ಳಲು ಸೂಚಿಸಿದೆ.

ಈ ಕಾರ್ಯಕ್ರಮವು ಮಾನ್ಯ ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ಸಚಿವರ ಅಧಯಕ್ಷತೆಯಲ್ಲಿ ನಡೆಯವುದರಿಂದ ಹಾಗೂ ಸದರಿ ದಿನದಂದು ವಿವಿಧ ಹಂತದ ಜನಪ್ರತಿನಿಧಿಗಳು ಪಾಲ್ಗೊಳ್ಳುವುದರಿಂದ ಅಚ್ಚುಕಟ್ಟಾಗಿ ಈ ಕಾರ್ಯಕ್ರಮ ಯಶ್ವಸ್ವಿಗೊಳಿಸಬೇಕಾಗಿದೆ. ಈ ಕುರಿತು ಜಿಲ್ಲಾ ಉಪ ನಿರ್ದೇಶಕರು ವೈಯಕ್ತಿಕ ಕಾಳಜಿ ವಹಿಸಿ ತಮ್ಮ ಕಛೇರಿಯ ಸಿಬ್ಬಂದಿಗಳ ಸಹಕಾರ ಪಡೆದು ಈ ಶಿಕ್ಷಣ ಸ್ಪಂದನ ಕಾರ್ಯಕ್ರಮವನ್ನು ಯಶ್ವಸ್ವಿಗೊಳಿಸಲು ಸೂಚಿಸಿದೆ.

ನಿರ್ದೇಶಕರು
ಪದವಿ ಪೂರ್ವ ಶಿಕ್ಷಣ ಇಲಾಖೆ

ಇವರಿಗೆ,
ಸಂಬಂಧಿಸಿದ ವಿಭಾಗದ ಪದವಿ ಪೂರ್ವ ಶಿಕ್ಷಣ ಇಲಾಖೆಯ ಎಲ್ಲಾ ಜಿಲ್ಲಾ ಉಪ ನಿರ್ದೇಶಕರುಗಳು- ಸೂಕ್ತ ಕ್ರಮಕ್ಕಾಗಿ.
ಪ್ರತಿಗಳು::-

1. ಮಾನ್ಯ ಶಿಕ್ಷಣ ಸಚಿವರ ಆಪ್ತ ಕಾರ್ಯದರ್ಶಿಗಳು, ಕೊಠಡಿ ಸಂಖ್ಯೆ:262, 262ಎ, 2ನೇ ಮಹಡಿ, ವಿಧಾನ ಸೌಧ, ಬೆಂಗಳೂರು.(ಮಾನ್ಯ ಸಚಿವರ ಅವಗಾಹನೆಗೆ ತರಲು ಕೋರಿದೆ)
2. ಮಾನ್ಯ ಸರ್ಕಾರದ ಪ್ರಧಾನ ಕಾರ್ಯದರ್ಶಿಗಳು, ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ಇಲಾಖೆ, 6ನೇ ಮಹಡಿ, ಬಹುಮಹಡಿ ಕಟ್ಟಡ, ಬೆಂಗಳೂರು-01.
3. ಇ-ಆಡಳಿತ ಶಾಖೆ, ಪದವಿ ಪೂರ್ವ ಶಿಕ್ಷಣ ಇಲಾಖೆ- ಅಂತರ್ಜಾಲದಲ್ಲಿ ಅಳವಡಿಸಲು.
4. ಕಚೇರಿ ಪ್ರತಿ.